**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳನ್ನು ಜವಾಬ್ದಾರಿಯುತ ನೈರ್ಮಲ್ಯ ಪ್ರಾಧಿಕಾರ Responsible Sanitation Authority (RSA) ಎಂದು ನೇಮಿಸುವ ಬಗ್ಗೆ

**ಉಲ್ಲೇಖ:** 1. ಕಾರ್ಯದರ್ಶಿಗಳು, ವಸತಿ ಮತ್ತು ನಗರ ವ್ಯವಹಾರಗಳ ಸಚಿವಾಲಯ ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: Z-16025/3/2018-CPHEEO, ದಿನಾಂಕ: 23-08-2019.

2. ದಿನಾಂಕ 15-12-2020 ರಂದು ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ 2013 ಅನುಷ್ಠಾನಗೊಳಿಸಿರುವ ಪ್ರಗತಿ ಪರಿಶೀಲನೆ ಸಭೆ.

3. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಪತ್ರದ ಸಂಖ್ಯೆ: ಪೌನಿ/ಘವನಿ/ಎಂ.ಎಸ್.ಸಿ.ವಿ/01/2020, ದಿನಾಂಕ:31-12-2020

Directorate of Municipal Admin
No
Compilation
12 FEB 2021
HQA / AD. Admin
DMA

*****

**ಪ್ರಸ್ತಾವನೆ**

ರಾಜ್ಯದಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ 2013, ರೀತ್ಯಾ ಒಳಚರಂಡಿ ಅಥವಾ ಸೆಪ್ಟಿಕ್ ಟ್ಯಾಂಕ್ ಸ್ವಚ್ಛಗೊಳಿಸುವುದನ್ನು ಕಡ್ಡಾಯವಾಗಿ ಯಾಂತ್ರೀಕೃತಗೊಳಿಸಿ, ಒಳಚರಂಡಿ ಅಥವಾ ಸೆಪ್ಟಿಕ್ ಟ್ಯಾಂಕ್‌ನ್ನು ಸುರಕ್ಷತೆಯಿಂದ ಸ್ವಚ್ಛಗೊಳಿಸಲು ಸರ್ಕಾರದ ವತಿಯಿಂದ ಹಲವು ಬಾರಿ ಸೂಚಿಸಿದರೂ ಕೂಡ ನಗರ ಪ್ರದೇಶಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್‌ನಿಂದಾಗಿ ಕೆಲಸಗಾರರು ಮರಣ ಹೊಂದಿರುವ ಪ್ರಕರಣಗಳು ಮರುಕಳಿಸುತ್ತಲೇ ಇವೆ. ಇಂತಹ ಪ್ರಕರಣಗಳನ್ನು ತಡೆಗಟ್ಟಲು ಪ್ರತಿ ನಗರಸ್ಥಳೀಯ ಸಂಸ್ಥೆಗಳು ತಮ್ಮಲ್ಲಿ ಲಭ್ಯವಿರುವ ಯಂತ್ರಗಳ ಬಗ್ಗೆ ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿ ಶಿಕ್ಷಾರ್ಹ ಅಪರಾಧ ಎಂಬುದರ ಬಗ್ಗೆ ವ್ಯಾಪಕ ಪ್ರಚಾರ ಕೈಗೊಳ್ಳುವುದರ ಜೊತೆಗೆ ಸ್ವಚ್ಛತಾ ಸಿಬ್ಬಂದಿಗಳಿಗೆ ಸೂಕ್ತ ತರಬೇತಿಯನ್ನು ನೀಡುವುದು ಅತೀ ಅವಶ್ಯಕವಿರುತ್ತದೆ.

ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ನಗರ ವ್ಯವಹಾರಗಳ ಸಚಿವಾಲಯವು ನಗರಗಳಲ್ಲಿ ಒಳಚರಂಡಿ/ಸೆಪ್ಟಿಕ್ ಟ್ಯಾಂಕ್‌ಗಳನ್ನು ಸುರಕ್ಷತೆಯಿಂದ ಸ್ವಚ್ಛಗೊಳಿಸುವ ಕುರಿತಾಗಿ ಪ್ರಮಾಣಿತ ಕಾರ್ಯಾಚರಣಾ ವಿಧಾನವನ್ನು(SOP) ಪ್ರಕಟಿಸಿರುತ್ತದೆ. ಸದರಿ SOP ರೀತ್ಯಾ ಎಲ್ಲಾ ನಗರ ವ್ಯಾಪ್ತಿಯಲ್ಲಿ ಒಳಚರಂಡಿ ಅಥವಾ

ಸೆಪ್ಟಿಕ್ ಟ್ಯಾಂಕ್‌ನ್ನು ಸುರಕ್ಷತೆಯಿಂದ ಸ್ವಚ್ಛಗೊಳಿಸುವ ಸಲುವಾಗಿ Responsible Sanitation Unit (RSU) ತಂಡವನ್ನು ರಚಿಸಬೇಕಿರುತ್ತದೆ. ಈಗಾಗಲೇ ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ RSU ಗಳು ರಚನೆಯಾಗಿರುವುದಾಗಿ ವರದಿಯಾಗಿರುತ್ತದೆ. ಕೇಂದ್ರ ಸರ್ಕಾರವು RSU ಗಳ ಕರ್ತವ್ಯ ಮತ್ತು ಹೊಣೆಗಾರಿಕೆಗಳ ಬಗ್ಗೆ ಸಲಹಾ ಕೈಪಿಡಿ ಹೊರತಂದಿದ್ದು, ಅದರ ರೀತ್ಯ ಅಗತ್ಯ ಕ್ರಮವಹಿಸಲು ಎಲ್ಲಾ ನಗರಸ್ಥಳೀಯ ಸಂಸ್ಥೆಗಳಿಗೆ ತಿಳಿಸಲಾಗಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳನ್ನು ಜವಾಬ್ದಾರಿಯುತ ನೈರ್ಮಲ್ಯ ಪ್ರಾಧಿಕಾರ [Responsible Sanitation Authority (RSA)] ಎಂದು ನೇಮಿಸಿ ಅದರಂತೆ ಸರ್ಕಾರದಿಂದ ಆದೇಶ ಹೊರಡಿಸಲು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರು ಉಲ್ಲೇಖ(3)ರೀತ್ಯಾ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಯವರನ್ನು ಜವಾಬ್ದಾರಿಯುತ ನೈರ್ಮಲ್ಯ ಪ್ರಾಧಿಕಾರ (RSA) ಎಂದು ನೇಮಿಸಿ ಈ ಕೆಳಕಂಡಂತೆ ಆದೇಶಿಸಲಾಗಿರುತ್ತದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 144 ಜಿಇಎಲ್ 2017, ಬೆಂಗಳೂರು, ದಿನಾಂಕ:10-2-2021**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ನಗರಪ್ರದೇಶಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಪದ್ಧತಿಯನ್ನು ನಿರ್ಮೂಲನೆ ಮಾಡಿ, ಸುರಕ್ಷತೆಯಿಂದ ಒಳಚರಂಡಿ ಅಥವಾ ಸೆಪ್ಟಿಕ್ ಟ್ಯಾಂಕ್ ಸ್ವಚ್ಛಗೊಳಿಸುವುದನ್ನು ಖಾತರಿಪಡಿಸಿಕೊಳ್ಳಲು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳನ್ನು **"ಜವಾಬ್ದಾರಿಯುತ ನೈರ್ಮಲ್ಯ ಪ್ರಾಧಿಕಾರ" (RSA)** ಎಂದು ನೇಮಿಸಿ ಆದೇಶಿಸಿದೆ. ಜವಾಬ್ದಾರಿಯುತ ನೈರ್ಮಲ್ಯ ಪ್ರಾಧಿಕಾರದ ಕರ್ತವ್ಯ ಮತ್ತು ಜವಾಬ್ದಾರಿಗಳು ಈ ಕೆಳಕಂಡಂತಿದೆ.

- ನಗರಸ್ಥಳೀಯ ಸಂಸ್ಥೆಗಳಲ್ಲಿ RSU ತಂಡವು ಸಕ್ರಿಯವಾಗಿ ಕಾರ್ಯಾಚರಿಸುವಂತೆ ಕ್ರಮವಹಿಸುವುದು.
- ನಗರಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ RSU ತಂಡವು ಖಾಸಗಿ ನೈರ್ಮಲ್ಯ ಸಂಸ್ಥೆಗಳನ್ನು ಗುರುತಿಸಿ, ನೊಂದಣಿ ಮಾಡಿಕೊಳ್ಳುವುದನ್ನು ಖಾತರಿಪಡಿಸಿಕೊಳ್ಳುವುದು.
- ನಗರಸ್ಥಳೀಯ ಸಂಸ್ಥೆಗಳು ಹಾಗೂ ಖಾಸಗಿ ವ್ಯಕ್ತಿಗಳು/ಸಂಘ ಸಂಸ್ಥೆಗಳು ಸೆಪ್ಟಿಕ್ ಟ್ಯಾಂಕ್ ಸ್ವಚ್ಛಗೊಳಿಸಲು ವಿಧಿಸುವ ಶುಲ್ಕವು ನಗರ ಸ್ಥಳೀಯ ಸಂಸ್ಥೆಗಳ ವರ್ಗಾವಾರು ಏಕರೂಪದ ದರಗಳಿದ್ದು, ಸುಸ್ಥಿರ ಮಾದರಿಯಲ್ಲಿ ಕಾರ್ಯಾಚರಿಸುವುದನ್ನು ಖಾತರಿಪಡಿಸಿಕೊಳ್ಳುವುದು.
- ಸೆಪ್ಟಿಕ್ ಟ್ಯಾಂಕ್‌ಗಳ ಸ್ವಚ್ಛಗೊಳಿಸುವಾಗ ಕೆಲವು ಅನಿವಾರ್ಯ ಸಂದರ್ಭಗಳಲ್ಲಿ ಮಾನವ ಪ್ರವೇಶ ಅಗತ್ಯವಿರುತ್ತದೆ. ಅಂತಹ ಸಂದರ್ಭದಲ್ಲಿ ಸಂಭವಿಸಬಹುದಾದ ಅಪಾಯಗಳ ಮೌಲ್ಯಮಾಪನ ಮಾಡಿ ಸುರಕ್ಷಿತವಿದ್ದಲ್ಲಿ ಮಾನವ ಪ್ರವೇಶಕ್ಕೆ ಅನುಮತಿ ನೀಡುವುದರ ಬಗ್ಗೆ ನಗರಸ್ಥಳೀಯ ಸಂಸ್ಥೆಗಳಿಂದ ಬರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದು.

- ನಗರಸ್ಥಳೀಯ ಸಂಸ್ಥೆಗಳಲ್ಲಿ ಅನೈರ್ಮಲ್ಯ ಶೌಚಾಲಯಗಳು ಇಲ್ಲದಿರುವಂತೆ ಹಾಗೂ ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿಯನ್ನು ಸಂಪೂರ್ಣವಾಗಿ ತೊಡೆದುಹಾಕಿ, ಜಿಲ್ಲೆಯನ್ನು ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಮುಕ್ತ ಜಿಲ್ಲೆಯೆಂದು ಘೋಷಿಸಲು ಕ್ರಮ ಕೈಗೊಳ್ಳುವುದು.
- ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿ ನಿಷೇಧ ಮತ್ತು ಅವರ ಪುನರ್ವಸತಿ ಕಾಯ್ದೆ 2013ಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಕ್ರಮವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲತಾ.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ
(ಪೌರಾಡಳಿತ-2 ಮತ್ತು ಮಂಡಳಿ)
ನಗರಾಭಿವೃದ್ಧಿ ಇಲಾಖೆ.

ಇವರಿಗೆ:

1. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
3. ರಾಜ್ಯದ ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
4. ರಾಜ್ಯದ ಎಲ್ಲಾ ಜಿಲ್ಲೆಯ ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ.
5. ರಾಜ್ಯದ ಎಲ್ಲಾ ಮಹಾನಗರಪಾಲಿಕೆ ಆಯುಕ್ತರು.
6. ರಾಜ್ಯದ ಎಲ್ಲಾ /ನಗರಸಭೆ/ ಪುರಸಭೆ/ ಪಟ್ಟಣ ಪಂಚಾಯಿತಿಗಳ ಪೌರಾಯುಕ್ತರು/ ಮುಖ್ಯಾಧಿಕಾರಿಗಳು (ಕ್ರ.ಸಂ. 3 ರಿಂದ 6ರವರೆಗಿನ ಅಧಿಕಾರಿಗಳಿಗೆ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯದ ಮುಖಾಂತರ).
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.